ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 09–09–2021

## ಮಾಧ್ಯಮ ಆಹ್ವಾನ
## Media Invitation

**ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ–2021**

**ಮುಖ್ಯ ಅತಿಥಿಗಳು:**
ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

**ಅಧ್ಯಕ್ಷತೆ:**
ಉಮೇಶ್ ವಿಶ್ವನಾಥ ಕತ್ತಿ
ಮಾನ್ಯ ಅರಣ್ಯ ಹಾಗೂ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು

ದಿನಾಂಕ: 11–09–2021, ಶನಿವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಅರಣ್ಯ ಭವನ, ಬೆಂಗಳೂರು.

ಹೆಚ್ಚಿನ ಮಾಹಿತಿಗಾಗಿ: ಶ್ರೀ ಮಂಜುನಾಥ್, ಉಪ ಅರಣ್ಯಾಧಿಕಾರಿ, ಮೊಬೈಲ್ ಸಂಖ್ಯೆ: 9886632327 ಇವರನ್ನು ಸಂಪರ್ಕಿಸುವುದು.

## ಪತ್ರಿಕಾ ಪ್ರಕಟಣೆ
### PRESS RELEASE

### ಸೋಮವಾರದಿಂದ ವಿಧಾನ ಮಂಡಲ ಅಧಿವೇಶನ: ಕಲಾಪದಲ್ಲಿ ಸಚಿವರ ಕಡ್ಡಾಯ ಹಾಜರಿಗೆ ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಸಭಾಪತಿ ಬಸವರಾಜ ಹೊರಟ್ಟಿ ಕೋರಿಕೆ.

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ಸೋಮವಾರ ದಿನಾಂಕ 13-09-2021 ರಿಂದ ಹತ್ತು ದಿನಗಳ ಕಾಲ ವಿಧಾನಮಂಡಲದ ಅಧಿವೇಶನ ನಡೆಯಲಿದ್ದು, ಸದನ ಕಲಾಪಗಳ ಸಂದರ್ಭದಲ್ಲಿ ಸಚಿವರು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ಸೂಚನೆ ನೀಡುವಂತೆ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿ ಬಸವರಾಜ ಹೊರಟ್ಟಿ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರನ್ನು ಕೋರಿದ್ದಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿಧಾನ ಮಂಡಲದ ಅಧಿವೇಶನ ಬಹುಮುಖ್ಯವಾಗಿದ್ದು ನಾಡಿನ ಜ್ವಲಂತ ಸಮಸ್ಯೆಗಳ ಬಗ್ಗೆ ಹಾಗೂ ಸಾರ್ವಜನಿಕರ ಸಂಕಷ್ಟಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅಧಿವೇಶನ ಸೂಕ್ತ ವೇದಿಕೆಯಾಗಿದೆ. ಹೀಗಾಗಿ ಶಾಸನ ಸಭೆಯ ಕಲಾಪಗಳು ನಡೆಯುವಾಗ ಸಚಿವರು ಸದನದಲ್ಲಿ ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಸಭಾಪತಿ ಕೋರಿದ್ದಾರೆ.

ಈ ಹಿಂದೆ ನಡೆದಿರುವ ಅಧಿವೇಶನಗಳ ಸಂದರ್ಭದಲ್ಲಿ ಹಲವು ಸಚಿವರು, ತಮ್ಮ ಕ್ಷೇತ್ರಕ್ಕೆ ಸಂಬಂಧಿತ ಕಾರ್ಯಗಳ ಕಾರಣದ ಮೇಲೆ ಸದನಕ್ಕೆ ಗೈರುಹಾಜರಾಗುವ ಕುರಿತು ಅನುಮತಿ ಕೋರುತ್ತಿದ್ದುದು ಸರ್ವೇ ಸಾಮಾನ್ಯವಾಗಿದೆ ಮಾನ್ಯ ಸದಸ್ಯರು ಸಾರ್ವಜನಿಕ ಮಹತ್ವದ ವಿಚಾರಗಳ ಬಗ್ಗೆ ಸದನದಲ್ಲಿ ಕೇಳುವ ಪ್ರಶ್ನೆಗಳಿಗೆ ಸಂಬಂಧಿತ ಸಚಿವರು ಉತ್ತರ ನೀಡಬೇಕಾಗಿರುವುದು ಅವರ ಕರ್ತವ್ಯ ಹಾಗೂ ಜವಾಬ್ದಾರಿ ಆದರೆ ಚರ್ಚೆಯ ವೇಳೆ ಸಚಿವರು ಸದನದಲ್ಲಿ ಇಲ್ಲದೇ ಇರುವುದರಿಂದ ಸಂಬಂಧಪಟ್ಟ ಪ್ರಶ್ನೆಗೆ ಸಮರ್ಪಕ ಉತ್ತರ ದೊರೆಯದೇ ಸಮಸ್ಯೆಗೆ ಸೂಕ್ತ ಪರಿಹಾರ ಸಿಗುವುದಿಲ್ಲ. ಸಚಿವರ ಗೈರಿನಿಂದಾಗಿ ಕಲಾಪ ನಡೆಸುವ ಉದ್ದೇಶ ಸಾಫಲ್ಯಗೊಳ್ಳುವುದಿಲ್ಲ ಎಂದು ಸಭಾಪತಿ ಅಭಿಪ್ರಾಯಪಟ್ಟಿದ್ದಾರೆ.

ಸಚಿವರ ಅನುಪಸ್ಥಿತಿಯು , ಆಡಳಿತಾರೂಢ ಸರಕಾರದಿಂದ ಉತ್ತರ ಪಡೆಯುವ ಮಾನ್ಯ ಸದಸ್ಯರ ಹಕ್ಕು ಮತ್ತು ಅವಕಾಶವನ್ನು ವಂಚಿಸಿದಂತಾಗುತ್ತದೆ, ಕಾರಣ ಸಚಿವರು ಸದನದಲ್ಲಿ ಹಾಜರಿರುವುದನ್ನು ಖಾತ್ರಿಪಡಿಸಿಕೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹ ಪೂರ್ವಕವಾಗಿ ಕೋರಿದ್ದಾರೆ.

ಮಂತ್ರಿಮಂಡಲದ ಎಲ್ಲಾ ಸದಸ್ಯರು ಸಹ ಸ್ವಯಂ ಪ್ರೇರಿತರಾಗಿ ಕಡ್ಡಾಯವಾಗಿ ಸದನದ ಕಾರ್ಯ ಕಲಾಪಗಳಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಜವಾಬ್ದಾರಿ ನಿರ್ವಹಿಸುವಂತೆ ಸೂಚಿಸಿರುವ ಸಭಾಪತಿ ಬಸವರಾಜ ಹೊರಟ್ಟಿ, ಅಧಿವೇಶನದ ವೇಳೆ ತಮ್ಮ ಕ್ಷೇತ್ರಗಳ ಕಾರ್ಯಕ್ರಮಗಳನ್ನು ಉಲ್ಲೇಖಿಸಿ ಸದನ ಕಲಾಪದಿಂದ ವಿನಾಯಿತಿ ಕೋರಿ ಮನವಿ ಸಲ್ಲಿಸದಂತೆ ಎಲ್ಲಾ ಸಚಿವರಿಗೆ ತಿಳಿಸಿದ್ದಾರೆ.

ಅಧಿವೇಶನದ ಯಶಸ್ವಿಯಲ್ಲಿ ಕೇವಲ ಸಚಿವರ ಹಾಗೂ ಶಾಸಕರುಗಳ ಪಾತ್ರವಿರದೇ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ಪಾಲ್ಗೊಳ್ಳುವಿಕೆಯೂ ಅಷ್ಟೇ ಪ್ರಮುಖವಾಗಿದೆ. ಹೀಗಾಗಿ ರಚನೆ ವೇಳೆ ಸದನದಲ್ಲಿ ಅಧಿಕಾರಿಗಳ ಉಪಸ್ಥಿತಿ ಕುರಿತು ಮುಖ್ಯಕಾರ್ಯದರ್ಶಿಗಳು ಗಮನಹರಿಸಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿ ಸೂಚಿಸಿದ್ದಾರೆ.

ವಿಧಾನ ಪರಿಷತ್ತಿನ ಅಧಿವೇಶನದ ಕಲಾಪದಲ್ಲಿ ಆಯಾ ದಿನದಲ್ಲಿ ಹಾಜರಾಗುವ ಸಚಿವರ ಹಾಗೂ ಅಧಿಕಾರಿಗಳ ಹೆಸರನ್ನು ಆಯಾ ದಿನದ ಸದನ ಆರಂಭಗೊಳ್ಳುವಾಗಲೇ ಪ್ರಕಟಿಸಲಾಗುವುದು ಹಾಗೂ ಗೈರು ಹಾಜರಾದವರ ಮಾಹಿತಿಯನ್ನು ಸಂಬಂಧಿಸಿದವರಿಗೆ ಕಳುಹಿಸಿ ಕ್ರಮಕ್ಕೆ ಸೂಚಿಸಲಾಗುವುದೆಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

## ವಿಧಾನಸಭೆಯ ಕಾರ್ಯಕಲಾಪಗಳನ್ನು ಲೋಕಸಭೆ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ಕರ್ನಾಟಕ ವಿಧಾನಸಭೆಯ ಅಧಿವೇಶನವು ಸೆಪ್ಟೆಂಬರ್ 13 ರಿಂದ ಪ್ರಾರಂಭವಾಗಲಿದ್ದು, ಅಧಿವೇಶನದ ಕಾರ್ಯಕಲಾಪಗಳನ್ನು ಲೋಕಸಭೆಯ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ ಮಾಡಲು ಹಾಗೂ ಚಿತ್ರೀಕರಿಸಿದ ದೃಶ್ಯಗಳನ್ನು ಇತರೆ ಖಾಸಗಿ ಚಾನೆಲ್‌ಗಳಿಗೆ ಸ್ಯಾಟಲೈಟ್ ಮೂಲಕ ಸಂಪರ್ಕವನ್ನು ಒದಗಿಸುವ ಕಾರ್ಯವನ್ನು ಬೆಂಗಳೂರು ದೂರದರ್ಶನ ಕೇಂದ್ರಕ್ಕೆ ಹಾಗೂ ಅದೇ ರೀತಿ ಸದನದ ಕಾರ್ಯಕಲಾಪಗಳ ಛಾಯಾಚಿತ್ರಗಳನ್ನು ತೆಗೆದು ಮುದ್ರಣ ಮಾಧ್ಯಮದವರಿಗೆ ಒದಗಿಸುವ ಕಾರ್ಯವನ್ನು ವಾರ್ತಾ ಇಲಾಖೆಯವರಿಗೆ ವಹಿಸಲಾಗಿದೆ.

ಬೆಂಗಳೂರು ದೂರದರ್ಶನ ಕೇಂದ್ರದವರು ಚಿತ್ರೀಕರಿಸಿದ ವಿಧಾನಸಭೆಯ ಕಾರ್ಯಕಲಾಪಗಳ ಔಟ್‌ಪುಟ್ ಅನ್ನು ಖಾಸಗಿ ಸುದ್ದಿ ವಾಹಿನಿಯವರು 1. C-Band downlink parameters – satellite: Gsat-17, Downlink frequency: 3981MHz, polarization: Horizontal, FEC:3/4, Symbol Rate: 2.9 Msps, Modulation : QPSK.

2. Ku – Band downlink parameters satellite: Gsat-16, Downlink frequency: 12527MHz, polarization : Horizontal, FEC:3/4, Symbol Rate: 2.9 Msps, Modulation : 8 PSK, ಈ ಲಿಂಕ್ ಅಡಿಯಲ್ಲಿ ಪಡೆಯಬಹುದಾಗಿದೆ.

ಖಾಸಗಿ ಸುದ್ದಿ ವಾಹಿನಿಗಳು ಲಿಂಕ್ ಸಂಪರ್ಕವನ್ನು ಪಡೆಯುವ ಪ್ರಕ್ರಿಯೆ ಕುರಿತು ಹಾಗೂ ಇದಕ್ಕೆ ಸಂಬಂಧಿಸಿದಂತೆ ಯಾವುದೇ ಸಹಾಯ/ಸಹಕಾರದ ಅವಶ್ಯವಿದ್ದಲ್ಲಿ ಬೆಂಗಳೂರು, ದೂರದರ್ಶನ ಕೇಂದ್ರದ ನಿರ್ದೇಶಕರು (ಇಂಜಿನಿಯರಿಂಗ್), ಆರ್. ವೆಂಕಟೇಶ್ ಮೊಬೈಲ್ ಸಂಖ್ಯೆ: 9444329565 ಹಾಗೂ ಸಹಾಯಕ ನಿರ್ದೇಶಕರು (ಇಂಜಿನಿಯರಿಂಗ್), ಎ.ವಿ.ಎಸ್. ಸೆಲ್ವರಾಜ್, ಮೊಬೈಲ್ ಸಂಖ್ಯೆ: 9886078925 ಇವರನ್ನು ಸಂಪರ್ಕಿಸಬಹುದಾಗಿದೆ.

ಸದನದ ಕಾರ್ಯಕಲಾಪಗಳನ್ನು ವರದಿ ಮಾಡುವ ವರದಿಗಾರರಿಗೆ ಮಾತ್ರ ಈ ಬಾರಿಯೂ ಸಹ ಸಭಾಂಗಣದ ಎರಡನೇ ಮಹಡಿಯಲ್ಲಿರುವ ಪತ್ರಕರ್ತರ ಗ್ಯಾಲರಿಗೆ ಪ್ರವೇಶಿಸಲು ಅವಕಾಶವಿರುತ್ತದೆ. ಆದರೆ, ಖಾಸಗಿ ಸುದ್ದಿ ವಾಹಿನಿಗಳ ಕ್ಯಾಮೆರಾಮೆನ್ ಹಾಗೂ ಮುದ್ರಣ ಮಾಧ್ಯಮದ ಛಾಯಾಗ್ರಾಹಕರಿಗೆ ವಿಧಾನಸಭೆಯ ಸಭಾಂಗಣದೊಳಗೆ / ಎರಡನೇ ಮಹಡಿಯ ಪತ್ರಕರ್ತರ ಗ್ಯಾಲರಿಗೆ ಪ್ರವೇಶಾಕಾಶ ಇರುವುದಿಲ್ಲ.

ವರದಿಗಾರರು ಸದನದ ಒಳಗೆ ಮೊಬೈಲ್ ದೂರವಾಣಿ, ಟ್ಯಾಬ್ ಇತ್ಯಾದಿಗಳನ್ನು ಕೊಂಡೊಯ್ಯಬಾರದು. ಎಲ್ಲಾ ಮುದ್ರಣ ಮಾಧ್ಯಮದವರು ಮತ್ತು ಸುದ್ದಿವಾಹಿನಿಯವರು ಸಹಕರಿಸಬೇಕೆಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ನಿರ್ದೇಶಕರು (ಐಟಿ) ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಛಾಯಾಚಿತ್ರ ಶೀರ್ಷಿಕೆ:**

ಘನತೆವೆತ್ತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ವತಿಯಿಂದ ಇಂದು ಗಾಯನ ಸಮಾಜದಲ್ಲಿ ಏರ್ಪಡಿಸಿದ್ದ ಸಂಸ್ಕೃತ ಮಹೋತ್ಸವ ಹಾಗೂ ಸಂಸ್ಕೃತ ಗ್ರಂಥ ಪುರಸ್ಕಾರ ಪ್ರದಾನ ಸಮಾರಂಭವನ್ನು ಉದ್ಘಾಟಿಸಿದರು. ಈ ವೇಳೆ ಕುಲಪತಿ, ರಿಜಿಸ್ಟ್ರಾರ್ ಸೇರಿ ಮುಂತಾದ ಗಣ್ಯರು ಇದ್ದರು.

Shri Thaawarchand Gehlot, Hon'ble Governor of Karnataka inaugurated Samskrita Mahotsava & Samskrita book award program organized by Karnataka Samskrit University at Bengaluru Gayana Samaja. VC, Registrar and other dignitaries were present.

## ಪರ್ವ ನಾಟಕ ಪ್ರದರ್ಶನ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ರಂಗಾಯಣ ಮೈಸೂರು ಪರ್ವ ರಂಗಪ್ರಸ್ತುತಿಯನ್ನು ಸೆಪ್ಟೆಂಬರ್ 11 ಮತ್ತು 12 ರಂದು (ಶನಿವಾರ ಮತ್ತು ಭಾನುವಾರ) ಬೆಳಿಗ್ಗೆ 10.00 ಗಂಟೆಗೆ ಪರ್ವ ನಾಟಕದ ಪೂರ್ಣ ಪ್ರದರ್ಶನವನ್ನು ರಂಗಾಯಣದ ಭೂಮಿಗೀತ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಹಕಾರ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ಬೆಂಗಳೂರು ಪೂರ್ವ ವಲಯದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರ ವ್ಯಾಪ್ತಿಯಲ್ಲಿ ಹಳೇ ಬೈಯಪ್ಪನಹಳ್ಳಿ ಪ್ರದೇಶದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಅವಶ್ಯಕತೆ ಇರುವ ಪ್ರಯುಕ್ತ ಪಡಿತರ ಚೀಟಿದಾರರ ಹಿತದೃಷ್ಟಿಯಿಂದ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡುವ ಅವಶ್ಯಕತೆ ಇರುತ್ತದೆ. ಆದ್ದರಿಂದ ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ದತಿ ನಿಯಂತ್ರಣ ಆದೇಶ 2016 ಮತ್ತು ನಂತರ ತಿದ್ದುಪಡಿ ಆದೇಶ 2017 ಮತ್ತು 2018ರ ಷರತ್ತುಗಳಿಗೆ ಒಳಪಟ್ಟಂತೆ ವಾರ್ಡ್ ಸಂಖ್ಯೆ 50, ಪಡಿತರ ಚೀಟಿಗಳ ಸಂಖ್ಯೆ 874 ಹಳೇ ಬೈಯಪ್ಪನಹಳ್ಳಿಯಲ್ಲಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಸಕ್ಷಮ ಪ್ರಾಧಿಕಾರಿಯಾದ ನಾನು ಪ್ರಾಧಿಕರಣ ಮಂಜೂರು ಮಾಡಲು ಕನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ದತಿ ನಿಯಂತ್ರಣ ಆದೇಶ 2018ರ ಆದೇಶದಡಿ ಅರ್ಹ ಸಹಕಾರ ಸಂಘ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಹಕಾರಿ ಸಂಘವು ಕರ್ನಾಟಕ ಸಹಕಾರಿ ಸಂಘಗಳ ಕಾಯ್ದೆ 1959 ರಡಿಯಲ್ಲಿ ನೋಂದಣಿಯಾದ ಸಹಕಾರ ಸಂಘಗಳು ಅರ್ಜಿಯನ್ನು ಸೆಪ್ಟೆಂಬರ್ 08 ರಿಂದ ಅಕ್ಟೋಬರ್ 07, 2021 ರ ಸಂಜೆ 5.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದು.

ಆರ್ಥಿಕವಾಗಿ ಸದೃಡವಾದ ಸಹಕಾರ ಸಂಘ ಅಥವಾ ಸಂಘಗಳು ಮಾತ್ರ (ಕಳೆದ 3 ವರ್ಷಗಳ ಲೆಕ್ಕಗಳನ್ನು ಆಡಿಟ್ ಮಾಡಿಸಿರುವ) ಈ ಸಂಘಗಳು ಕನಿಷ್ಟ 3 ವರ್ಷಗಳಿಗೆ ಮೇಲ್ಪಟ್ಟು ಕಾರ್ಯನಿರತವಾಗಿರಬೇಕು. ಆರ್ಥಿಕ ಭದ್ರತೆಗಾಗಿ ಪ್ರಕಟಣೆ ಹೊರಡಿಸಿದ ದಿನಾಂಕದಂದು ಬ್ಯಾಂಕ್‍ನಲ್ಲಿ ಎರಡು ವರ್ಷ ಅವಧಿಯ ಹಣಕಾಸು ವ್ಯವಹಾರ ನಡೆಸಿರುವ ಬಗ್ಗೆ ಕಡ್ಡಾಯವಾಗಿ ಬ್ಯಾಂಕ್ ಖಾತೆಯ ದೃಢೀಕೃತ ಪ್ರತಿ ಸಲ್ಲಿಸಬೇಕು.

ನಿಗಧಿತ ನಮೂನೆಯ ಅರ್ಜಿ ಜೊತೆಗೆ ಸಹಕಾರಿ ಸಂಘ ಅಥವಾ ಸಂಘಗಳ ನೋಂದಣಿ ಪತ್ರ ನವೀಕರಣ ಪ್ರತಿ ಮತ್ತು ಬೈಲಾ ಪ್ರತಿಗಳನ್ನು ಒದಗಿಸುವುದು. ಸಹಕಾರ ಸಂಘವು 3 ವರ್ಷಕ್ಕಿಂತ ಹೆಚ್ಚಿನ ಅವಧಿಯಾಗಿದ್ದು, 2 ಲಕ್ಷ ರೂ.ಗಳ ಮೊತ್ತವನ್ನು ಕಳೆದ 2 ವರ್ಷಗಳಲ್ಲಿ ಬ್ಯಾಂಕಿನಲ್ಲಿ ನಿರಂತರವಾಗಿ ಠೇವಣಿ ಹೊಂದಿರುವ ಬಗ್ಗೆ ದಾಖಲೆ ಈ ಎಲ್ಲಾ ಅಗತ್ಯ ದಾಖಲೆಗಳನ್ನು ನಿಗಧಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಉಪನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಪೂರ್ವ ವಲಯ, ಬೆಂಗಳೂರು ರವರ ಕಚೇರಿಯಿಂದ ಪ್ರಕಟಣೆ ಹೊರಡಿಸಿದ 30 ದಿನಗಳ ಒಳಗಾಗಿ ಸಲ್ಲಿಸಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಸಹಾಯಕರು / ಪ್ರಥಮ ದರ್ಜೆ ಸಹಾಯಕರ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕ ಸೇವ ಆಯೋಗದ ಅಧಿಸೂಚನೆ ದಿನಾಂಕ: 31-01-2020 ಮತ್ತು ಸೇರ್ಪಡೆ ಅಧಿಸೂಚನೆಗಳು ಹಾಗೂ ತಿದ್ದುಪಡಿ ಅಧಿಸೂಚನೆಗಳಂತೆ 2019-20ನೇ ಸಾಲಿನ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಸಹಾಯಕರು / ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ಉಳಿಕೆ ಮೂಲ ವೃಂದದ ಮತ್ತು ಹೈದರಾಬಾದ್ ಕರ್ನಾಟಕ ವೃಂದಗಳಿಗೆ ಮತ್ತು ನವದೆಹಲಿಯ ಕರ್ನಾಟಕ ಭವನದ ಉಳಿಕೆ ಮೂಲ ವೃಂದದ ಮತ್ತು ಹೈದರಾಬಾದ್ ಕರ್ನಾಟಕ ವೃಂದದ ಸಹಾಯಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಜೇಷ್ಠತೆ ಮತ್ತು ಅವರು ಅರ್ಜಿಯಲ್ಲಿ ಕೋರಿರುವ ಮೀಸಲಾತಿಗಳು ಹಾಗೂ ಹುದ್ದೆಗಳ ಲಭ್ಯತೆಗನುಗುಣವಾಗಿ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಹೆಸರು ಮತ್ತು ನೋಂದಣಿ ಸಂಖ್ಯೆಗಳುಳ್ಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‍ಸೈಟ್ http://kpsc.kar.nic.in.-Lists-Eligiblity List ನಲ್ಲಿ ಪ್ರಕಟಿಸಲಾಗಿದೆ.

ಈಗಾಗಲೇ ಆಯೋಗದ ದಿನಾಂಕ: 24-07-2021ರ ಪರಿಷ್ಕೃತ ತಿದ್ದುಪಡಿ ಅಧಿಸೂಚನೆಯಲ್ಲಿ ಸೂಚಿಸಿರುವಂತೆ ಸದರಿ ಅರ್ಹತಾ ಪಟ್ಟಿಯಲ್ಲಿ ಹೆಸರು ಮತ್ತು ನೋಂದಣಿ ಸಂಖ್ಯೆಗಳ ಮುಂದೆ "***" ಎಂದು ನಮೂದಿಸಿರುವ ಅಭ್ಯರ್ಥಿಗಳ ಅರ್ಹತೆಯ ಸದರಿ ನೇಮಕಾತಿಯ ಸಂಬಂಧ ಆಯೋಗದಿಂದ ಶೀಘ್ರದಲ್ಲಿಯೇ ನಡೆಸಲಾಗುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ಫಲಿತಾಂಶಕ್ಕೆ ಒಳಪಟ್ಟಿರುತ್ತದೆ ಮತ್ತು ಅಂತಹ ಅಭ್ಯರ್ಥಿಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಫಲಿತಾಂಶದ ನಂತರವೇ ದಾಖಲೆಗಳ ಪರಿಶೀಲನೆಯ ಕಾರ್ಯವನ್ನು ನಡೆಸಲಾಗುವುದು. ಉಳಿದಂತೆ ಅಂತಹ ಅಭ್ಯರ್ಥಿಗಳಿಗೆ ನಡೆಸಲಾಗುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ದಿನಾಂಕವನ್ನು ಶೀಘ್ರವಾಗಿ ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು ಹಾಗೂ ಇತರೆ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಯ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳಿಗೆ ಸೂಚನಾ ಪತ್ರದ ಮೂಲಕ ಶೀಘ್ರದಲ್ಲಿಯೇ ತಿಳಿಸಲಾಗುವುದು ಹಾಗೂ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅತಿಥಿ ಉಪನ್ಯಾಸಕರ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

ವಿಶ್ವವಿದ್ಯಾನಿಲಯದ ಅಧಿಸೂಚನೆ ದಿನಾಂಕ: 03.09.2021 ರ ಪ್ರಕಾರ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ (PG) ಮತ್ತು ವಿಶ್ವವಿದ್ಯಾನಿಲಯದ ಬಹುಶಿಸ್ತೀಯ ಮಹಿಳಾ ಘಟಕ ಕಾಲೇಜಿಗೆ (UG), ಮಲ್ಲೇಶ್ವರಂರಲ್ಲಿ 2021–22ನೇ ಶೈಕ್ಷಣಿಕ ಸಾಲಿಗೆ ಅಗತ್ಯವಿರುವ ಪೂರ್ಣ/ಅರೆಕಾಲಿಕ ಅತಿಥಿ ಉಪನ್ಯಾಸಕರ ನೇಮಕಾತಿಗೆ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ: 15.09.2021 ರವರೆಗೆ ವಿಸ್ತರಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Extension of last date for submission of Guest Faculty application

Bengaluru, September 09 (Karnataka Information):

In continution of the University notification dated: 03.09.2021, the last date for receiving applications for full-/part-time Guest Faculty for PG Departments and University Constituent Womens College (UG), Malleshwaram for the academic year 2021-22 is extended up to 15.09.2021.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 09, (ಕರ್ನಾಟಕ ವಾರ್ತೆ):

**ದಿನಾಂಕ: 9.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 37 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 42 | ಉತ್ತಮ | $NO_2$ |
| 3 | ಕವಿಕ, ಮೈಸೂರುರಸ್ತೆ | 82 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 30 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 68 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 56 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 50 | ಉತ್ತಮ | $PM_{10}$ |
| **(9.9.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 44 | ಉತ್ತಮ | $PM_{10}$ |
| 9 | ಪೀಣ್ಯ | 71 | ತೃಪ್ತಿಕರ | $PM_{10}$ |

| | | | | |
|---|---|---|---|---|
| 10 | ಬಿಟಿಎಂ ಲೇಔಟ್ | 45 | ಉತ್ತಮ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 9.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 37 | Good | CO |
| 2 | Jayanagar 5th Block, Shalini ground | 42 | Good | $NO_2$ |
| 3 | KAVIKA, Mysore Road | 82 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 30 | Good | $PM_{10}$ |
| 5 | HSR Layout, near Central Silkboard | 68 | Satisfactory | $PM_{10}$ |
| 6 | City Railway Station, Magestic, Bengaluru | 56 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 50 | Good | $PM_{10}$ |
| **(9.9.2021 at 11.05 AM)** | | | | |
| 8 | BWSSB, Kadabesanahalli | 44 | Good | $PM_{10}$ |

| | | | | |
|---|---|---|---|---|
| 9 | Peenya | 71 | Satisfactory | $PM_{10}$ |
| 10 | BTM Layout | 45 | Good | $PM_{10}$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |